ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಟ್ಟಿಭತ್ಯೆಯ ದರಗಳ ಪರಿಷ್ಕರಣೆ.

ಓದಲಾಗಿದೆ: (1) ದಿನಾಂಕ: 23.08.2024ರ ಸರ್ಕಾರಿ ಆದೇಶ ಸಂಖ್ಯೆ: ಆಇ 21 ಎಸ್ಆರ್‌ಪಿ 2024

(2) ದಿನಾಂಕ: 27.11.2024ರ ಸರ್ಕಾರಿ ಆದೇಶ ಸಂಖ್ಯೆ: ಆಇ 43 ಎಸ್ಆರ್‌ಪಿ 2024

(3) ದಿನಾಂಕ: 07.05.2025ರ ಸರ್ಕಾರಿ ಆದೇಶ ಸಂಖ್ಯೆ: ಆಇ 8 ಎಸ್ಆರ್‌ಪಿ 2025

(4) ದಿನಾಂಕ:15.10.2025ರ ಸರ್ಕಾರಿ ಆದೇಶ ಸಂಖ್ಯೆ:ಆಇ 18 ಎಸ್ಆರ್‌ಪಿ 2025

(5) ದಿನಾಂಕ: 11.05.2026ರ ಸರ್ಕಾರಿ ಆದೇಶ ಸಂಖ್ಯೆ:ಆಇ 05 ಎಸ್ಆರ್‌ಪಿ 2026

(6) ಭಾರತ ಸರ್ಕಾರದ ದಿನಾಂಕ:29.10.2026ರ ಅಧಿಕೃತ ಜ್ಞಾಪನ ಸಂಖ್ಯೆ:1/2(i)/2026-E.II(B) ಮತ್ತು ದಿನಾಂಕ:04.11.2026ರ ಅಧಿಕೃತ ಜ್ಞಾಪನ ಸಂಖ್ಯೆ:42/02/2024-P&PW(D)/E-9475.

*****

ಸರ್ಕಾರದ ಆದೇಶ ಸಂಖ್ಯೆ: ಆಇ 10 ಎಸ್ಆರ್‌ಪಿ 2026

ಬೆಂಗಳೂರು, ದಿನಾಂಕ: 05ನೇ ನವೆಂಬರ್ 2026

2024ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ಪಡೆಯುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ **1ನೇ ಜುಲೈ 2026** ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ ಶೇ.**15.75** ರಿಂದ ಶೇ.**18ಕ್ಕೆ** ಪರಿಷ್ಕರಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ತುಟ್ಟಿಭತ್ಯೆಯ ಉದ್ದೇಶಕ್ಕಾಗಿ "ಮೂಲ ವೇತನ" ಎಂದರೆ ಸರ್ಕಾರಿ ನೌಕರನು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ,

(ಅ) 2024ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಸ್ಥಗಿತ ವೇತನ ಬಡ್ತಿಯನ್ನು ನೀಡಲಾಗಿದ್ದರೆ, ಆ ಸ್ಥಗಿತ ವೇತನ ಬಡ್ತಿ;

(ಆ) 2024ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ ನಿಯಮ 3(ಸಿ) ಯನ್ನು ಓದಿಕೊಂಡು 7ನೇ ನಿಯಮದ (3)ನೇ ಉಪನಿಯಮದ ಮೇರೆಗೆ ಅವನಿಗೆ ನೀಡಲಾದ ವೈಯಕ್ತಿಕ ವೇತನ ಯಾವುದಾದರೂ ಇದ್ದರೆ, ಆ ವೈಯಕ್ತಿಕ ವೇತನ;

(ಇ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಮಂಜೂರು ಮಾಡಲಾಗಿರುವ ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ, ಅವುಗಳು ಸೇರುತ್ತವೆ.

3. ತುಟ್ಟಿ ಭತ್ಯೆಯ ಮಂಜೂರಾತಿಯ ಉದ್ದೇಶಕ್ಕಾಗಿ ಮೂಲವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

4. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೂ ಸಹ **ದಿನಾಂಕ 1ನೇ ಜುಲೈ 2026** ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರಗಳನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಪ್ರಸಕ್ತ **ಶೇ.15.75 ರಿಂದ ಶೇ.18** ಕ್ಕೆ ಹೆಚ್ಚಿಸಿ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

5. ತುಟ್ಟಿ ಭತ್ಯೆಯ ಮಂಜೂರಾತಿಯ ಉದ್ದೇಶಕ್ಕಾಗಿ ಕ.ನಾ.ಸೇ(ಪ.ವೇ) ನಿಯಮಗಳು, 2024ರ ನಿಯಮ 3ರಲ್ಲಿ ಸೂಚಿಸಿರುವ ಮತ್ತು ಸದರಿ ನಿಯಮದಡಿ ಹೊರಡಿಸಿರುವ ಆದೇಶಗಳಲ್ಲಿ ಸೂಚಿಸಿರುವ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

6. ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ನಿವೃತ್ತರಾದ ನೌಕರರು ರಾಜ್ಯ ಪಿಂಚಣಿದಾರರಾಗುವುದರಿಂದ ಅವರಿಗೂ ಸಹ ಈ ಆದೇಶ ಅನ್ವಯಿಸುತ್ತದೆ.

7. ಸರ್ಕಾರದ ಮತ್ತು ಜಿಲ್ಲಾ ಪಂಚಾಯತ್‌ಗಳ ಪೂರ್ಣಾವಧಿ ನೌಕರರಿಗೆ, ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ವರ್ಕ್‌ಚಾರ್ಜ್ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರುಗಳಿಗೆ ಈ ಆದೇಶ ಅನ್ವಯಿಸುತ್ತದೆ.

8. ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ನೌಕರರಿಗೆ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಗಳ ನ್ಯಾಯಾಂಗ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

9. ಈ ಆದೇಶದ ಮೇರೆಗೆ ಲಭ್ಯವಿರುವ ತುಟ್ಟಿ ಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

10. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

11. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆ ಬಾಕಿ ಮೊತ್ತವನ್ನು, 2026ರ **ನವೆಂಬರ್ ತಿಂಗಳ** ವೇತನ/ಪಿಂಚಣಿ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ.

12. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

5/11/26

(ಮಂಜುನಾಥ್ ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

5/11/2026

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.

11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಪಿ.ಇ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
22. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
23. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
24. ವಾರಪತ್ರ/ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲ ತಾಣ finance.karnataka.gov.in ವೀಕ್ಷಿಸಿ.